ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	243 (294)
ಸದಸ್ಯರ ಹೆಸರು	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	09-12-2020
ಉತ್ತರಿಸುವವರು	ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳು ಯಾವುವು:	ಕೊಡಗು ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ 07 ದೇವಾಲಯಗಳಿರುತ್ತವೆ. ವಿವರ ಈ ಕೆಳಕಂಡಂತಿದೆ.

ಕ್ರ ಸಂ.	ದೇವಾಲಯದ ಹೆಸರು
1	ಶ್ರೀ ಭಗಂಡೇಶ್ವರ ಮತ್ತು ತಲಕಾವೇರಿ ದೇವಾಲಯ, ಭಾಗಮಂಡಲ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ.
2	ಶ್ರೀ ಸುಬ್ರಾಯ ದೇವಸ್ಥಾನ, ಕುಂಜಲ ಗ್ರಾಮ, ನಾಪೋಕ್ಲು, ಮಡಿಕೇರಿ ತಾಲ್ಲೂಕು
3	ಶ್ರೀ ಓಂಕಾರೇಶ್ವರ ದೇವಸ್ಥಾನ ಮತ್ತು ಛತ್ರ, ಮಡಿಕೇರಿ ಪಟ್ಟಣ
4	ಶ್ರೀ ಮಹಾಲಿಂಗೇಶ್ವರ ದೇವಸ್ಥಾನ, ಪಾಲೂರು, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ.
5	ಶ್ರೀ ರಾಮೇಶ್ವರ ದೇವಾಲಯ, ಕುರುಚಿ (ಶ್ರೀಮಂಗಲ) ವಿರಾಜಪೇಟೆ ತಾಲ್ಲೂಕು.
6	ರಾಜರ ಗದುಗೆ ಮಡಿಕೇರಿ ಪಟ್ಟಣ
7	ಶ್ರೀ ಹರಿಶ್ಚಂದ್ರ ದೇವಾಲಯ (ಶ್ರೀ ಅಗಸ್ತ್ಯೇಶ್ವರ ದೇವಾಲಯ) ಪಾಲೂರು (ಹರಿಶ್ಚಂದ್ರ ಗ್ರಾಮ) ಮಡಿಕೇರಿ ತಾಲ್ಲೂಕು,

	ಪ್ರಶ್ನೆ	ಉತ್ತರ
ಆ)	ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪದಿಂದಾಗಿ ಸದರಿ ದೇವಸ್ಥಾನಗಳಲ್ಲಿ ಹಾಳಾಗಿರುವ ಮೂಲ ಸೌಕರ್ಯಗಳನ್ನು ಪುನರ್ ಕಲ್ಪಿಸಲು ಮಂಜೂರು ಮಾಡಲಾದ ಅನುದಾನ ಎಷ್ಟು;	ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪದಿಂದಾಗಿ ಸದರಿ ದೇವಸ್ಥಾನಗಳಲ್ಲಿ ಹಾಳಾಗಿರುವ ಮೂಲ ಸೌಕರ್ಯಗಳನ್ನು ಪುನರ್ ಕಲ್ಪಿಸಲು ಸರ್ಕಾರದಿಂದ ಅನುದಾನ ಮಂಜೂರಾಗಿರುವುದಿಲ್ಲ.

......2

ಇ)	ಮೂಲ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಇದುವರೆಗೂ ಅನುದಾನ ದೊರೆಯದ ದೇವಸ್ಥಾನಗಳಿಗೆ, ಪ್ರಸಕ್ತ ಆರ್ಥಿಕ ವರ್ಷದಲ್ಲಿಯಾದರೂ ವಿಶೇಷ ಅನುದಾನವನ್ನು ನೀಡಲಾಗುವುದೇ?	ಕೋವಿಡ್–19 ವೈರಸ್ ಹಿನ್ನೆಲೆಯಲ್ಲಿ, ಅನುದಾನದ ಕೊರತೆ ಇರುತ್ತದೆ. ಆದ್ದರಿಂದ ವಿಶೇಷ ಅನುದಾನವನ್ನು ನೀಡುವ ಕುರಿತು ಸರ್ಕಾರದ ಹಂತದಲ್ಲಿ ಪ್ರಸ್ತಾವನೆ ಇರುವುದಿಲ್ಲ.

ಸಂಖ್ಯೆ: ಕಂಇ 171 ಮುಸಪ್ರ 2020

(ಕೋಟ ಶ್ರೀನಿವಾಸ ಪೂಜಾರಿ)
ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ,
ಮೀನುಗಾರಿಕೆ ಹಾಗೂ ಬಂದರು
ಮತ್ತು ಒಳನಾಡು ಜಲಸಾರಿಗೆ ಸಚಿವರು